Akashvani: Bangalore
National Bulletin In Kannada
03.07.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
03.07.2026: 13.10hrs
**********

ಮುಖ್ಯಾಂಶಗಳು :

1. ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯನ್ನು ತೀವ್ರವಾಗಿ ಖಂಡಿಸಿದ ಭಾರತ, ಜಪಾನ್
2. ರಾಜಸ್ಥಾನ, ಗುಜರಾತ್‌ಗೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
3. ನಾವೀನ್ಯತೆ ಆಧಾರಿತ ಅಭಿವೃದ್ಧಿಗೆ ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆ ಬಲ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್
4. ಫಿಫಾ ವಿಶ್ವಕಪ್ ಫುಟ್ಬಾಲ್: ೧೬ರ ಸುತ್ತಿಗೆ ಸ್ವಿಟ್ಜರ್‌ಲೆಂಡ್, ಸ್ಪೇನ್ ಮುನ್ನಡೆ

*********

ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆ ಸೇರಿದಂತೆ ಎಲ್ಲಾ ರೀತಿಯ ಭಯೋತ್ಪಾದನೆ ಮತ್ತು ಹಿಂಸಾತ್ಮಕ ಉಗ್ರವಾದವನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಜಪಾನ್ ಪ್ರಧಾನಿ ಸನೇ ತಕೈಚಿ ಬಲವಾಗಿ ಖಂಡಿಸಿದ್ದಾರೆ. ೧೬ ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯ ಜಂಟಿ ಹೇಳಿಕೆ ಪ್ರಕಟಿಸಲಾಗಿದ್ದು, ಕಳೆದ ವರ್ಷ ಏಪ್ರಿಲ್ ೨೨ ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಉಭಯ ನಾಯಕರು ತೀವ್ರವಾಗಿ ಖಂಡಿಸಿದ್ದಾರೆ. ಉಗ್ರರು, ಭಯೋತ್ಪಾದನೆಗೆ ಹಣಕಾಸು ಒದಗಿಸುವವರು ಮತ್ತು ಸಂಘಟಕರ ವಿರುದ್ಧ ವಿಳಂಬವಿಲ್ಲದೆ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ ಖೈದಾ, ಐಸಿಸ್, ಲಷ್ಕರ್-ಎ-ತಯ್ಯಿಬಾ, ಜೈಶ್-ಎ-ಮೊಹಮ್ಮದ್ ಮತ್ತು ಅವರ ಪ್ರಾಕ್ಸಿಗಳು ಸೇರಿದಂತೆ ವಿಶ್ವಸಂಸ್ಥೆ ಪಟ್ಟಿ ಮಾಡಲಾದ ಎಲ್ಲಾ ಭಯೋತ್ಪಾದಕ ಗುಂಪುಗಳು ಮತ್ತು ಸಂಸ್ಥೆಗಳ ವಿರುದ್ಧ ಸಂಘಟಿತ ಕ್ರಮ ಕೈಗೊಳ್ಳಬೇಕೆಂದು ಉಭಯ ನಾಯಕರು ಕರೆ ನೀಡಿದರು.

*********

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ರಾಜಸ್ಥಾನ ಮತ್ತು ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ರಾಜಸ್ಥಾನ ಪ್ರವಾಸದ ವೇಳೆ, ಅವರು ಜೋಧ್‌ಪುರ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಅನ್ನು ಉದ್ಘಾಟಿಸಲಿದ್ದಾರೆ. ೪೮೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ಯೋಜನೆಯು ವಾರ್ಷಿಕ ೨೦ ಲಕ್ಷ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯ ಹೊಂದಿದೆ. ಇದೇ ಸಂದರ್ಭದಲ್ಲಿ ಜೋಧ್‌ಪುರದಲ್ಲಿ ಪರಿಷ್ಕೃತ ಉಡಾನ್ ಯೋಜನೆಗೆ ಅವರು ಚಾಲನೆ ನೀಡಲಿದ್ದಾರೆ. ಬಾಲೋತ್ರಾದಲ್ಲಿ ಸುಮಾರು ೧.೦೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ಅವರು ಲೋಕಾರ್ಪಣೆಗೊಳಿಸಲಿದ್ದಾರೆ. ಈ ಯೋಜನೆಗಳು ಪೆಟ್ರೋಕೆಮಿಕಲ್ಸ್, ನಗರ ಸಾರಿಗೆ, ರೈಲ್ವೆ, ರಸ್ತೆ, ನವೀಕರಿಸಬಹುದಾದ ಇಂಧನ ಮತ್ತು ವಿದ್ಯುತ್ ಪ್ರಸರಣ ಸೇರಿದಂತೆ ಹಲವು ಕ್ಷೇತ್ರಗಳನ್ನು ಒಳಗೊಂಡಿವೆ.ಬಾಲೋತ್ರಾದ ಪಚ್ಪದ್ರಾದಲ್ಲಿ ದೇಶದ ಮೊದಲ ಗ್ರೀನ್‌ಫೀಲ್ಡ್ ಸಮಗ್ರ ತೈಲ ಸಂಸ್ಕರಣಾ ಮತ್ತು ಪೆಟ್ರೋಕೆಮಿಕಲ್ ಸಂಕೀರ್ಣವನ್ನು ಅವರು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಇದೇ ವೇಳೆ, ೧೩ ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ಜೈಪುರ ಮೆಟ್ರೋ ರೈಲು ಯೋಜನೆಯ ಎರಡನೇ ಹಂತಕ್ಕೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಜೊತೆಗೆ, ರಾಜಸ್ಥಾನ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಗೊಂಡಿರುವ ಸುಮಾರು ೫೪ ಸಾವಿರ ಯುವಕರಿಗೆ ನೇಮಕಾತಿ ಪತ್ರಗಳನ್ನು ಪ್ರಧಾನಮಂತ್ರಿ ವಿತರಿಸಲಿದ್ದಾರೆ. ಗುಜರಾತ್‌ಗೆ ನಾಳೆ ಸಂಜೆ ಭೇಟಿ ನೀಡಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಸಾನಂದ್‌ನಲ್ಲಿ ಸಿಜಿ ಸೆಮಿ ಸಂಸ್ಥೆಯ ಸೆಮಿಕಂಡಕ್ಟರ್ ಘಟಕವನ್ನು ಉದ್ಘಾಟಿಸಲಿದ್ದಾರೆ.

*********

ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯು ಸುಸ್ಥಿರ, ಸ್ಥಿತಿಸ್ಥಾಪಕ ಹಾಗೂ ನಾವೀನ್ಯತೆ ಆಧಾರಿತ ಅಭಿವೃದ್ಧಿಯ ಮುಂದಿನ ಹಂತಕ್ಕೆ ವೇಗ ನೀಡುವ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಭಿಪ್ರಾಯಪಟ್ಟಿದ್ದಾರೆ. ಪ್ಯಾರಿಸ್‌ನಲ್ಲಿ ನಡೆದ ಭಾರತ-ಫ್ರಾನ್ಸ್ ಉದ್ಯಮಿಗಳ ದುಂಡುಮೇಜಿನ ಸಭೆ ಉದ್ದೇಶಿಸಿ ಮಾತನಾಡಿದ ಅವರು, ತಂತ್ರಜ್ಞಾನದಲ್ಲಿನ ಪ್ರಗತಿ, ಪೂರೈಕೆ ಸರಪಳಿಯ ವೈವಿಧ್ಯೀಕರಣ, ಇಂಧನ ಪರಿವರ್ತನೆ ಹಾಗೂ ಜಾಗತಿಕ ರಾಜಕೀಯ ಬೆಳವಣಿಗೆಗಳಿಂದಾಗಿ ವಿಶ್ವ ಆರ್ಥಿಕತೆ ವೇಗವಾಗಿ ರೂಪಾಂತರಗೊಳ್ಳುತ್ತಿದೆ ಎಂದು ಹೇಳಿದರು. 'ವಿಕಸಿತ ಭಾರತ-೨೦೪೭' ಗುರಿ ಸಾಧಿಸುವ ಭಾರತದ ಪಯಣದಲ್ಲಿ ಪಾಲುದಾರರಾಗುವಂತೆ ಫ್ರಾನ್ಸ್‌ನ ಉದ್ಯಮಿಗಳು ಮತ್ತು ಹೂಡಿಕೆದಾರರಿಗೆ ಇದೇ ವೇಳೆ ಸಚಿವರು

ಆಹ್ವಾನ ನೀಡಿದರು. ಉಭಯ ರಾಷ್ಟ್ರಗಳ ಹಂಚಿಕೆಯ ಸಮೃದ್ಧಿಯನ್ನು ಸಾಧಿಸಲು ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ. ಕಳೆದ ಒಂದು ದಶಕದಲ್ಲಿ ಭಾರತ ಮತ್ತು ಫ್ರಾನ್ಸ್ ನಡುವಿನ ದ್ವಿಪಕ್ಷೀಯ ವ್ಯಾಪಾರ ಎರಡು ಪಟ್ಟು ಹೆಚ್ಚಾಗಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

*********

ಅಖಿಲ ಭಾರತ ತೃಣಮೂಲ ಕಾಂಗ್ರೆಸ್ ಪಕ್ಷದ ಸಾಂಸ್ಥಿಕ ಚುನಾವಣೆ ಹಾಗೂ ಪಕ್ಷದ ಪರವಾಗಿ ಅಧಿಕೃತವಾಗಿ ಸಹಿ ಹಾಕುವವರಿಗೆ ಸಂಬಂಧಿಸಿದಂತೆ ಉದ್ಭವಿಸಿರುವ ಪರಸ್ಪರ ವಿರುದ್ಧದ ಹಕ್ಕು ಪ್ರತಿಪಾದನೆಗಳ ಕುರಿತು ಪ್ರತಿಕ್ರಿಯೆ ಸಲ್ಲಿಸುವಂತೆ ಭಾರತ ಚುನಾವಣಾ ಆಯೋಗ ಪಕ್ಷದ ಉಭಯ ಬಣಗಳಿಗೆ ಸೂಚಿಸಿದೆ. ಈ ಕುರಿತು ತೃಣಮೂಲ ಕಾಂಗ್ರೆಸ್ ಅಧ್ಯಕ್ಷೆ ಮಮತಾ ಬ್ಯಾನರ್ಜಿ ಹಾಗೂ ಪಕ್ಷದ ನಾಯಕ ರಿತಬ್ರತ ಬ್ಯಾನರ್ಜಿ ಅವರಿಗೆ ಪ್ರತ್ಯೇಕ ಪತ್ರಗಳನ್ನು ಬರೆದಿರುವುದಾಗಿ ಚುನಾವಣಾ ಆಯೋಗ ತಿಳಿಸಿದೆ. ಉಭಯ ಬಣಗಳು ಸೋಮವಾರ ಸಂಜೆ ೫.೩೦ರೊಳಗೆ ತಮ್ಮ ಪ್ರತಿಕ್ರಿಯೆಯನ್ನು ಸಲ್ಲಿಸುವಂತೆ ಚುನಾವಣಾ ಆಯೋಗ ನಿರ್ದೇಶನ ನೀಡಿದೆ.

*********

ಜಮ್ಮು ಮತ್ತು ಕಾಶ್ಮೀರದಲ್ಲಿ ವಾರ್ಷಿಕ ಶ್ರೀ ಅಮರನಾಥ ಯಾತ್ರೆ ಇಂದು ಬೆಳಗ್ಗೆ ಪಹಲ್ಗಾಮ್ ಮತ್ತು ಬಾಲ್ತಾಲ್ ಮಾರ್ಗಗಳಿಂದ ಆರಂಭವಾಗಿದೆ. ೫೭ ದಿನಗಳ ಈ ಪವಿತ್ರ ಯಾತ್ರೆಯಲ್ಲಿ ದೇಶದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಸಮುದ್ರಮಟ್ಟದಿಂದ ಸುಮಾರು ೩ ಸಾವಿರ ೮೮೮ ಮೀಟರ್ ಎತ್ತರದಲ್ಲಿರುವ ಅಮರನಾಥ ಗುಹಾ ದೇಗುಲಕ್ಕೆ ತೆರಳಿ, ಸ್ವಯಂ ರೂಪುಗೊಂಡಿರುವ ಹಿಮ ಶಿವಲಿಂಗದ ದರ್ಶನ ಪಡೆದು, ಶಿವನ ಆಶೀರ್ವಾದ ಪಡೆಯುವುದು ಯಾತ್ರೆಯ ಉದ್ದೇಶವಾಗಿದೆ. ರಕ್ಷಾ ಬಂಧನದ ದಿನವಾದ ಆಗಸ್ಟ್ ೧೮ರಂದು ಯಾತ್ರೆ ಸಂಪನ್ನಗೊಳ್ಳಲಿದೆ. ಅಮರನಾಥ ಯಾತ್ರೆ ಕೈಗೊಂಡಿರುವ ಯಾತ್ರಾರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಗಣ್ಯರು ಶುಭಾಶಯ ಕೋರಿದ್ದಾರೆ.

*********

ಅಯೋಧ್ಯೆಯ ಶ್ರೀರಾಮ ಮಂದಿರಕ್ಕೆ ಸಂಬಂಧಿಸಿದ ನಿಧಿ ಮತ್ತು ದೇಣಿಗೆ ದುರ್ಬಳಕೆ ಕುರಿತ ಎಲ್ಲ ಆರೋಪಗಳ ಬಗ್ಗೆ ನ್ಯಾಯಸಮ್ಮತ ಹಾಗೂ ಸಮಗ್ರ ತನಿಖೆ ನಡೆಸಬೇಕು ಎಂದು ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ಅಲೋಕ್ ಕುಮಾರ್ ಆಗ್ರಹಿಸಿದ್ದಾರೆ. ಅಯೋಧ್ಯೆ ಅಭಿವೃದ್ಧಿ ಕಾಮಗಾರಿಗಳಿಗೆ

ಸಂಬಂಧಿಸಿದ ಪ್ರಕರಣದಲ್ಲಿ ಚಂಪತ್ ರೈ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ಪ್ರತಿಕ್ರಿಯಿಸಿದ ಅವರು, ಈ ಹಂತದಲ್ಲಿ ಯಾವುದೇ ನಿರ್ದಿಷ್ಟ ಅಭಿಪ್ರಾಯ ವ್ಯಕ್ತಪಡಿಸಲು ಸಾಧ್ಯವಿಲ್ಲ. ಆರೋಪಗಳು ಕೇಳಿಬಂದಿದ್ದು, ಕೆಲವು ಮಂದಿ ಅವರ ವಿರುದ್ಧ ದೂರುಗಳನ್ನು ನೀಡಿದ್ದಾರೆ. ಆ ಆರೋಪಗಳ ಕುರಿತು ತನಿಖೆ ನಡೆಯುತ್ತಿದೆ ಎಂದು ಹೇಳಿದ್ದಾರೆ. ಈ ಹಿಂದೆ ಟ್ರಸ್ಟ್‌ನ ಕಚೇರಿ ಉಸ್ತುವಾರಿ ಪ್ರಕಾಶ್ ಗುಪ್ತಾ ಅವರು, ದೇಣಿಗೆ ಹಣ ಎಣಿಕೆ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿದ್ದರು. ನಗದು ದೇಣಿಗೆ ನಿರ್ವಹಣೆಗೆ ಭಾರತೀಯ ಸ್ಟೇಟ್ ಬ್ಯಾಂಕ್ ನಿಯೋಜಿಸಿದ್ದ ಸಿಬ್ಬಂದಿಯ ಪೈಕಿ ಕೆಲವರು ಅಕ್ರಮದಲ್ಲಿ ಭಾಗಿಯಾಗಿರಬಹುದು ಎಂಬ ಶಂಕೆಯನ್ನೂ ಅಲೋಕ್ ಕುಮಾರ್ ವ್ಯಕ್ತಪಡಿಸಿದ್ದಾರೆ.

*********

ಯುವಜನ ವ್ಯವಹಾರಗಳ ಇಲಾಖೆಯು ಇಂದು ನವದೆಹಲಿಯಲ್ಲಿ ಮೈ ಭಾರತ್ ಕೈಗಾರಿಕಾ ಸಂಘಟನೆಗಳ ಸಮಾವೇಶವನ್ನು ಆಯೋಜಿಸಿತ್ತು. ಅಸೋಚಾಂ, ಎಫ್‌ಐಸಿಸಿಐ, ಸಿಎಐಟಿ, ಸಿಐಐ ಸೇರಿದಂತೆ ಪ್ರಮುಖ ಕೈಗಾರಿಕಾ ಸಂಘಟನೆಗಳು ಸಮಾವೇಶದಲ್ಲಿ ಭಾಗವಹಿಸಿದ್ದವು. ಯುವಜನ ಅಭಿವೃದ್ಧಿಗಾಗಿ ಭವಿಷ್ಯದ ಸಹಭಾಗಿತ್ವದ ರೂಪುರೇಷೆಗಳ ಕುರಿತು ಚರ್ಚಿಸುವುದು ಹಾಗೂ ರಾಷ್ಟ್ರೀಯ ಯುವಜನ ಗುರಿಗಳನ್ನು ಕೈಗಾರಿಕಾ ವಲಯದ ಉಪಕ್ರಮಗಳೊಂದಿಗೆ ಸಂಯೋಜಿಸುವ ಕುರಿತು ಸಮಾವೇಶದಲ್ಲಿ ಸಮಾಲೋಚನೆ ನಡೆಯಿತು.

*********

ವೆನೆಜುವೆಲಾದಲ್ಲಿ ನಿಧನರಾದ ಭಾರತೀಯ ನಾವಿಕ ರಾಕೇಶ್ ಚೌಹಾಣ್ ಅವರ ಪಾರ್ಥಿವ ಶರೀರವನ್ನು ವಿರೂಪಗೊಳಿಸಿರುವ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸುವಂತೆ ವೆನೆಜುವೆಲಾ ಅಧಿಕಾರಿಗಳನ್ನು ಭಾರತ ಒತ್ತಾಯಿಸಿದೆ. ಘಟನೆ ಬೆಳಕಿಗೆ ಬಂದ ದಿನದಿಂದಲೇ ಸಂಬಂಧಪಟ್ಟ ಸ್ಥಳೀಯ ಅಧಿಕಾರಿಗಳೊಂದಿಗೆ ಈ ವಿಷಯವನ್ನು ನಿರಂತರವಾಗಿ ಪ್ರಸ್ತಾಪಿಸುತ್ತಿರುವುದಾಗಿ ಕರಾಕಾಸ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

*********

ಭೂಕಂಪದಿಂದ ತತ್ತರಿಸಿರುವ ವೆನೆಜುವೆಲಾಗೆ 'ಆಪರೇಷನ್ ಅಮಿಸ್ತಾದ್' ಅಡಿಯಲ್ಲಿ ಮಾನವೀಯ ನೆರವನ್ನು ಭಾರತ ಮತ್ತಷ್ಟು ವಿಸ್ತರಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯ, ಭಾರತೀಯ ಸೇನೆಯ ಫೀಲ್ಡ್

ಆಸ್ಪತ್ರೆ ಸಿಬ್ಬಂದಿಯು ವೆನೆಜುವೆಲಾದ ಭೂಕಂಪ ಪೀಡಿತ ಪ್ರದೇಶಗಳಲ್ಲಿ ಸಂತ್ರಸ್ತರಿಗೆ ನಿರಂತರವಾಗಿ ವೈದ್ಯಕೀಯ ಸೇವೆ ಒದಗಿಸುತ್ತಿದೆ ಎಂದು ತಿಳಿಸಿದೆ.

*********

ಆಂಧ್ರಪ್ರದೇಶದ ಮಾರ್ಕಾಪುರಂ ಜಿಲ್ಲೆಯಲ್ಲಿ ಇಂದು ಮುಂಜಾನೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದು, ಎಂಟು ಮಂದಿ ಗಾಯಗೊಂಡಿದ್ದಾರೆ. ಕಂಭಂ ವೈ ಜಂಕ್ಷನ್ ಸಮೀಪ ನಿಲ್ಲಿಸಿದ್ದ ಆಟೋಗೆ ಅತಿವೇಗವಾಗಿ ಬಂದ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಮೃತರು ಪ್ರಕಾಶಂ ಜಿಲ್ಲೆಯ ಗಿದ್ದಲೂರಿನ ನಿವಾಸಿಗಳಾಗಿದ್ದು, ಮದುವೆ ಸಮಾರಂಭದಲ್ಲಿ ಭಾಗವಹಿಸಲು ಕಂಭಂಗೆ ತೆರಳುತ್ತಿದ್ದರು. ಮಾರ್ಗ ಮಧ್ಯೆ ವಿನಾಯಕ ದೇವಸ್ಥಾನದ ಬಳಿ ಪ್ರಾರ್ಥನೆ ಸಲ್ಲಿಸಲು ವಾಹನ ನಿಲ್ಲಿಸಿದ್ದ ವೇಳೆ ಅಪಘಾತ ಸಂಭವಿಸಿದೆ.

*********

ಕೆನಡಾದ ವ್ಯಾಂಕೂವರ್‌ನಲ್ಲಿ ಇಂದು ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ೩೨ರ ಸುತ್ತಿನ ಪಂದ್ಯದಲ್ಲಿ ಸ್ವಿಟ್ಜರ್‌ಲೆಂಡ್ ತಂಡ, ಅಲ್ಜೀರಿಯಾ ವಿರುದ್ಧ ೨-೦ ಗೋಲುಗಳ ಅಂತರದಲ್ಲಿ ಜಯಗಳಿಸಿ, ೧೬ರ ಸುತ್ತಿಗೆ ಪ್ರವೇಶಿಸಿದೆ. ಮೊದಲ ಸುತ್ತಿನಲ್ಲಿ ಎರಡು ಗೆಲುವು ಹಾಗೂ ಒಂದು ಡ್ರಾ ದಾಖಲಿಸಿ 'ಬಿ' ಗುಂಪಿನಲ್ಲಿ ಅಗ್ರಸ್ಥಾನ ಪಡೆದಿದ್ದ ಸ್ವಿಟ್ಜರ್‌ಲೆಂಡ್, ಈ ಗೆಲುವಿನೊಂದಿಗೆ ಪಂದ್ಯಾವಳಿಯಲ್ಲಿ ತನ್ನ ಅಜೇಯ ಓಟವನ್ನು ಮುಂದುವರಿಸಿದೆ. ಕೆನಡಾದ ವ್ಯಾಂಕೂವರ್‌ನಲ್ಲಿ ಮಂಗಳವಾರ ನಡೆಯುವ ೧೬ರ ಸುತ್ತಿನ ಪಂದ್ಯದಲ್ಲಿ ಸ್ವಿಟ್ಜರ್‌ಲೆಂಡ್ ತಂಡ, ಕೊಲಂಬಿಯಾ ಅಥವಾ ಘಾನಾ ತಂಡವನ್ನು ಎದುರಿಸಲಿದೆ. ಕ್ಯಾಲಿಫೋರ್ನಿಯಾದ ಇಂಗಲ್‌ವುಡ್‌ನ ಲಾಸ್ ಏಂಜಲೀಸ್ ಕ್ರೀಡಾಂಗಣದಲ್ಲಿ ನಡೆದ ಮತ್ತೊಂದು ೩೨ರ ಸುತ್ತಿನ ಪಂದ್ಯದಲ್ಲಿ ಸ್ಪೇನ್ ತಂಡ, ಆಸ್ಟ್ರಿಯಾ ವಿರುದ್ಧ ೩-೦ ಗೋಲುಗಳಿಂದ ಜಯಗಳಿಸಿ ೧೬ರ ಸುತ್ತಿಗೆ ಪ್ರವೇಶಿಸಿದೆ. ಆರ್ಲಿಂಗ್ಟನ್‌ನ ಡಲ್ಲಾಸ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ೩೨ರ ಸುತ್ತಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ, ಈಜಿಪ್ಟ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೧.೩೦ಕ್ಕೆ ಆರಂಭವಾಗಲಿದೆ.

*****END****